2. ಹಾಗಿದ್ದಲ್ಲಿ ಅದರ ಅಂದಾಜು ವೆಚ್ಚದ ನಕ್ಷೆಯೇನು?

3. ಈ ಬಾರಿಯೇ ಆ ಯೋಜನೆಗೆ ಮಂಜೂರಾತಿ ಕೊಟ್ಟು ಕಾರ್ಯಾರಂಭಿಸಲು ಸರ್ಕಾರವು ಅನುವು ಮಾಡುತ್ತದೆಯೇ?

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು):-

1) ಹೌದು.

2) ರೂ.148.00 ಲಕ್ಷಗಳು

3) ಈ ಪ್ರಸ್ತಾವನೆಯನ್ನು ನಿಯಮಗಳನುಸಾರವಾಗಿ ಪರಿಶೀಲಿಸಲಾಗುವುದು.

ಹುಸಗುಂದ ತಾಲ್ಲೂಕು ಕಮ್ಮತ್ತಿ ಗ್ರಾಮಕ್ಕೆ ಪೋಲೀಸ್ ಔಟ್‌ಪೋಸ್ಟ್.

358 (771) ಶ್ರೀ ಹೆಚ್.ವೈ. ಮೇಟಿ (ಗುಳೇದಗುಡ್ಡ):- ಮಾನ್ಯ ಗೃಹ ಮತ್ತು ಅಬಕಾರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಸಗುಂದ ತಾಲ್ಲೂಕು ಕಮ್ಮತ್ತಿ ಗ್ರಾಮಕ್ಕೆ ಒಂದು ಪೋಲೀಸ್ ಔಟ್ ಪೋಸ್ಟ್ ಅಗತ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಮೇಲ್ಕಂಡ ಗ್ರಾಮಕ್ಕೆ ಪೋಲೀಸ್ ಔಟ್ ಪೋಸ್ಟ್ ತೆರೆಯುವ ಆಲೋಚನೆ ಸರ್ಕಾರಕ್ಕೆ ಇದೆಯೇ?

ಇ) ಹಾಗಿದ್ದಲ್ಲಿ ಅದನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಧರ್ಮಸಿಂಗ್ (ಗೃಹ ಮತ್ತು ಅಬಕಾರಿ ಸಚಿವರು):-

ಅ) ಇಲ್ಲ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಲಿ ವತಿಯಿಂದ ಬೀದರ್‌ಗೆ ಮಂಜೂರಾದ ಹಣ.

361 (550) ಶ್ರೀ ಬಸವರಾಜಪಾಟೀಲ್ ಅಟ್ಟೂರ್ (ಬಸವ ಕಲ್ಯಾಣ):- ಮಾನ್ಯ ಯೋಜನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. 1991-92ನೇ ಸಾಲಿನಲ್ಲಿ ಬೀದರ್ ಜಿಲ್ಲೆಗೆ ಹೈದ್ರಾಬಾದ್ - ಕರ್ನಾಟಕ ಅಭಿವೃದ್ಧಿ ಮಂಡಳಿಯಿಂದ ಮಂಜೂರಾದ ಹಣದ ಮೊತ್ತವೆಷ್ಟು? (ತಾಲ್ಲೂಕುವಾರು ವಿವರ ನೀಡುವುದು)

2. ಯಾವ, ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು ಹಣ ಖರ್ಚು ಮಾಡಲಾಗಿದೆ? (ತಾಲ್ಲೂಕುವಾರು ವಿವರ ನೀಡುವುದು)

ಶ್ರೀಮತಿ ಕೆ.ಎಸ್. ನಾಗರತ್ನಮ್ಮ (ಯೋಜನಾ, ಸಾಂಖ್ಯಿಕ ಹಣಕಾಸು ಮತ್ತು ಸಾಂಖ್ಯಿಕ ಸಚಿವರು):-

1) ಹೈದ್ರಾಬಾದ್ - ಕರ್ನಾಟಕ ಪ್ರದೇಶ ಅಭಿವೃದ್ಧಿ ಕಾರ್ಯಕ್ರಮಕ್ಕೆ ಹಣವನ್ನು ಜಿಲ್ಲಾ ಆಧಾರವಾ ತಾಲ್ಲೂಕುವಾರು ಬಿಡುಗಡೆ ಮಾಡುವ ಪದ್ಧತಿಯನ್ನು ಅನುಸರಿಸುತ್ತಿಲ್ಲ. ಕಾರ್ಯಕ್ರಮಗಳಿಗೆ ಅನುಗುಣವಾಗಿ ಹಣವನ್ನು ಬಿಡುಗಡೆ ಮಾಡಲಾಗುತ್ತಿದೆ.

2) ಬೀದರ್ ಜಿಲ್ಲೆಗೆ ಸಂಬಂಧಪಟ್ಟಂತೆ ಕಾಮಗಾರಿಗಳಿಗೆ 1991-92ನೇ ಸಾಲಿನಲ್ಲಿ ದಿನಾಂಕ 15-2-1992ರ ವರೆಗೆ 519.38 ಲಕ್ಷ ರೂ.ಗಳನ್ನು ಖರ್ಚು ಮಾಡಲಾಗಿದೆ.